# ಗ್ರೀನ್ ಎಐ ತರಬೇತಿ ಶಿಬಿರ ಸಮಾರೋಪ



ಹಳಿಯಾಳ: ಕೆಎಲ್ಎಸ್‌ವಿಡಿಐಟಿ ಹಳಿಯಾಳದಲ್ಲಿ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ (ಎಐಸಿಟಿಇ) ನವ ದೆಹಲಿ,ಶೆಲ್ ಪ್ರೋಗ್ರಾಮ್ ಮತ್ತು ಎಜುನೆಟ್ ನ ಜಂಟಿ ಸಹಯೋಗದಲ್ಲಿ ಗ್ರೀನ್ ಮತ್ತು ಆರ್ಟಿಫಿಷಿಯಲ್ ಇಂಟಲಿಜೆನ್ಸ್ ಕೌಶಲ್ಯ ಅಭಿವೃದ್ಧಿ ತರಬೇತಿ ಶಿಬಿರವು ನವೆಂಬರ್ 14 ರಂದು ಸಮಾರೋಪಗೊಂಡಿತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಎಜು ನೆಟ್ ನ ಸೌರಭ, ಸೂರಜ್, ಸಾರ್ಥಕ್ ಆಗಮಿಸಿದ್ದರು. ಗ್ರೀನ್ ಸ್ಕಿಲ್ ಕೌಶಲ್ಯ ವನ್ನು ಹೇಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕೆಂದು ವಿವರಿಸುತ್ತ, ಕೃತಕ ಬುದ್ದಿಮತ್ತೆ ಮತ್ತು ಯಂತ್ರ ಕಲಿಕೆ ಕುರಿತಾಗಿ ವಿವರಿಸಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಜಾಗತಿಕ ಮಟ್ಟದಲ್ಲಿ ಮುಂಚೂಣಿಯಲ್ಲಿರುವ ಕೃತಕ ಬುದ್ಧಿಮತ್ತೆ ಹಾಗೂ ಯಂತ್ರ ಕಲಿಕೆ ತಂತ್ರಜ್ಞಾನವನ್ನು ವಿದ್ಯಾರ್ಥಿಗಳು ಕಲಿಯುವುದರಿಂದ ವಿಪುಲ ಉದ್ಯೋಗಾವಕಾಶಗಳಿವೆ, ಈ ನಿಟ್ಟಿನಲ್ಲಿ ಮಹಾವಿದ್ಯಾಲಯವು ತರಬೇತಿ ಶಿಬಿರವನ್ನು ಆಯೋಜಿಸಿತ್ತು ಎಂದರು.

ಕಂಪ್ಯೂಟರ್ ಸೈನ್ಸ್ (ಎಐಎಂಎಲ್) ವಿಭಾಗದ ಮುಖ್ಯಸ್ಥೆ ಡಾ. ಪೂರ್ಣಿಮಾ ರಾಯ್ಕರ್ ಸ್ವಾಗತಿಸಿದರು. ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ವೆಂಕಟೇಶ ಶಂಕರ್ ವಂದಿಸಿದರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಭಾಗದ ಮುಖ್ಯಸ್ಥ ಡಾ. ನಾಗರಾಜ ಭಟ್ ವೇದಿಕೆ ಮೇಲೆ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಅಕ್ಟೋಬರ್ 27 ರಿಂದ ನವಂಬರ್ 14ರ ವರೆಗೆ 20 ದಿನಗಳ ಕಾಲ ಜರುಗಿದ ಈ ತರಬೇತಿ ಶಿಬಿರದಲ್ಲಿ ಕಂಪ್ಯೂಟರ್ ಸೈನ್ಸ್, ಕಂಪ್ಯೂಟರ್ ಸೈನ್ಸ್ (ಎ ಐ ಎಂ ಎಲ್ ), ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಕೊನೆಯ ವರ್ಷದ 150ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಎಜು ನೆಟ್ ನ ಮಹೇಶ್ ಪಾಟೀಲ್ ಈ ಕಾರ್ಯಕ್ರಮ ವನ್ನು ಸಂಯೋಜಿಸಿದ್ದರು.


Powered By KHUSHIHOST ® | License - ePaperCloud.com